ಕಾರ್ಮಿಕ ಮತ್ತು ಉದ್ಯೋಗ ಸಚಿವಾಲಯ

# ಸ್ಪ್ರೀ ಯೋಜನೆಯಡಿ ಉದ್ಯೋಗದಾತರು ಮತ್ತು ಉದ್ಯೋಗಿಗಳಿಗೆ ವಿವಿಧ ಸೌಲಭ್ಯಗಳು ಲಭ್ಯ

Posted On: 01 SEP 2025 8:10PM by PIB Bengaluru

ಸ್ಪ್ರೀ 2025 (ಉದ್ಯೋಗದಾತರು ಮತ್ತು ಉದ್ಯೋಗಿಗಳನ್ನು ನೋಂದಾವಣೆ ಉತ್ತೇಜಿಸುವ ಯೋಜನೆ 2025) ಎಂಬ ಯೋಜನೆಯನ್ನು ಕಾರ್ಮಿಕರ ವಿಮಾ ನಿಗಮವು ಜಾರಿಗೆ ತಂದಿದ್ದು, ಈ ಯೋಜನೆಯು 1ನೇ ಜುಲೈ ನಿಂದ 31ನೇ ಡಿಸೆಂಬರ್ ವರೆಗೆ ಜಾರಿಯಲ್ಲಿದ್ದು, ಉದ್ಯೋಗದಾತರು ಮತ್ತು ಉದ್ಯೋಗಿಗಳಿಗೆ ಒಂದು ಬಾರಿಯ ಅವಕಾಶವನ್ನು ನೀಡಿದ್ದು, ಈ ಅವಧಿಯಲ್ಲಿ ಉದ್ಯೋಗದಾತರು ನೋಂದಾವಣೆಯಾದಲ್ಲಿ ಹಿಂದಿನ ಅವಧಿಗೆ ಯಾವುದೇ ದಂಡ ಅಥವಾ ಬಾಕಿ ಪಾವತಿಯ ಅವಶ್ಯಕತೆ ಇರುವುದಿಲ್ಲ ಮತ್ತು ಯಾವುದೇ ತಪಾಸಣೆ ಇರುವುದಿಲ್ಲ, ಉದ್ಯೋಗದಾತರು ತಮ್ಮಲ್ಲಿ ಕಾರ್ಯನಿರ್ವಹಿಸುವ ಗುತ್ತಿಗೆ ಉದ್ಯೋಗಿಗಳನ್ನು ಒಳಗೊಂಡತೆ ಎಲ್ಲಾ ಉದ್ಯೋಗಿಗಳನ್ನು ಈ ಯೋಜನೆಯಡಿಯಲ್ಲಿ ನೋಂದಾಯಿಸಿದ್ದಲ್ಲಿ ನೋಂದಾವಣೆ ದಿನದಿಂದಲೇ ಕಾರ್ಮಿಕರ ವಿಮಾ ಕಾಯ್ದೆಯಡಿ ದೊರೆಯುವ ವಿವಿಧ ಸೌಲಭ್ಯಗಳನ್ನು ಪಡೆಯಲು ಅರ್ಹರಾಗುತ್ತಾರೆ.

ಈ ಯೋಜನೆಯ ಅನುಷ್ಠಾನದಂತೆ ಮತ್ತು ಮುಖ್ಯ ಕಛೇರಿಯ ಸೂಚನೆಯಂತೆ ಉಪಪ್ರಾದೇಶಿಕ ಕಛೇರಿ, ಬೊಮ್ಮಸಂದ್ರ ಕಛೇರಿಯು ಫಲಾನುಭವಿಗಳ ಸಹಕಾರದಲ್ಲಿ ಮತ್ತು ರಾಜ್ಯ ಸರ್ಕಾರದ ವಿವಿಧ ಕಛೇರಿಗಳ ಸಹಯೋಗದೊಡನೆ ಹಲವಾರು ಅರಿವು ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಈ ಅವಧಿಯಲ್ಲಿ ಉದ್ಯೋಗದಾತರು ಮತ್ತು ಉದ್ಯೋಗಿಗಳು ನೋಂದಾವಣೆಯಾದಲ್ಲಿ ಅವರಿಗೆ ದೊರಕುವ ಅನುಕೂಲತೆಗಳ ಬಗ್ಗೆ ಅರಿವನ್ನು ಮೂಡಿಸಲಾಗುತ್ತಿದೆ. ಈ ಅವಧಿಯಲ್ಲಿ ಸಾವಿರಾರು ಉದ್ಯೋಗಿಗಳನ್ನು ಈ ಯೋಜನೆಯಡಿಯಲ್ಲಿ ನೋಂದಾಯಿಸಲಾಗಿದೆ ಮತ್ತು ಅವರ ಅಗತ್ಯತೆಗಳಿಗೆ ಅನುಸಾರ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ.

ಈ ಮೇಲೆ ತಿಳಿಸಿದಂತೆ, ಇದುವರೆವಗೂ ಈ ಕಛೇರಿಯು ವಿವಿಧ ಸ್ಥಳಗಳಲ್ಲಿ 23 ಕಾರ್ಯಕ್ರಮಗಳನ್ನು ಹಮ್ಮಿಕೊಂಡು ವಿವಿಧ ಕೈಗಾರಿಕಾ ಸಂಘಗಳಲ್ಲಿ ಕಾರ್ಯಕ್ರಮವನ್ನು ನಡೆಸಲಾಗಿದೆ ಮತ್ತು ಉದ್ಯೋಗಿಗಳನ್ನು ಸಾಮಾಜಿಕ ಸುರಕ್ಷತೆಯ ವ್ಯಾಪ್ತಿಗೆ ತರಲಾಗಿದೆ.

ಈ ಯೋಜನೆಯು ಒಂದು ಮೈಲಿಗಲ್ಲಾಗಿದ್ದು ಅರ್ಧ ಅವಧಿಯನ್ನು ಕ್ರಮಿಸಿ ಸಫಲತೆಯತ್ತ ಸಾಗುತ್ತಿದ್ದು, ಎಲ್ಲಾ ಉದ್ಯೋಗದಾತರು ಈ ಅವಧಿಯಲ್ಲಿ ತಮ್ಮ ಸಂಸ್ಥೆಗಳು, ಘಟಕಗಳನ್ನು ಹಾಗೂ ಉದ್ಯೋಗಿಗಳನ್ನು ನೋಂದಾವಣೆ ಮಾಡುವುದರ ಮೂಲಕ ಕಾರ್ಮಿಕರ ರಾಜ್ಯ ವಿಮಾ ನಿಗಮದಿಂದ ದೊರೆಯುವ ಹಲವಾರು ರೀತಿಯ ಸೌಲಭ್ಯಗಳನ್ನು ಪಡೆಯಲು ಅನುಕೂಲಮಾಡಿಕೊಡಲು ಇಎಸ್ಐಸಿಯು ಈ ಮೂಲಕ ಕೋರುತ್ತಿದೆ.

ಇಎಸ್ಐಸಿಯ ಈ ಉಪಕ್ರಮವು ಸರಳ ಹಾಗೂ ತಡೆಹರಿತ ವ್ಯವಹಾರವನ್ನು ಪ್ರೋತ್ಸಾಹಿಸುತ್ತಾ ಉದ್ಯೋಗದಾತರು ಯಾವುದೇ ದಂಡಶುಲ್ಕವಿಲ್ಲದೆ ತಮ್ಮ ಸಂಸ್ಥೆಯನ್ನು ನೋಂದಾವಣೆ ಮಾಡಿಕೊಂಡು ಮತ್ತು ಉದ್ಯೋಗಿಗಳನ್ನು ನೋಂದಾವಣೆ ಮಾಡಿ ಆರೋಗ್ಯ ಸೌಲಭ್ಯ ಹಾಗು ಸಾಮಾಜಿಕ ಸುರಕ್ಷೆಯ ವ್ಯಾಪ್ತಿಯನ್ನು ವಿಸ್ತರಿಸುವುದರ ಜೊತೆಗೆ ಈ ಯೋಜನೆಯಡಿ ದೊರೆಯುವ ಸೌಲಭ್ಯಗಳನ್ನು ಅರ್ಹರಿಗೆ ತಲುಪಿಸುವುದಾಗಿದೆ.

SPREE / ಅಮ್ನೆಸ್ಟಿ / ELI ಯೋಜನೆ ಕುರಿತು ಮಾಹಿತಿಗಾಗಿ ದಯವಿಟ್ಟು ಸಂಪರ್ಕಿಸಿ ಈ ಕೆಳಗಿನ ಇ ಮೈಲ್ ಅಥವಾ ಸಂಖ್ಯೆಗೆ ಕರೆಮಾಡಿ: sro-bommasandra@esic.nic.in, 080-26786391

(Release ID: 2162887) Visitor Counter : 2